ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ಮೂಲಭೂತ ಸೌಲಭ್ಯಗಳನ್ನು ನಿರ್ಮಿಸಿಕೊಳ್ಳದಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

507 (687) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿಯಲ್ಲಿರುವ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವನ್ನು ಯಾವ ವರ್ಷದಲ್ಲಿ ಆರಂಭಿಸಲಾಯಿತು ;

(ಆ) ಈ ವಿಶ್ವವಿದ್ಯಾಲಯಕ್ಕಾಗಿ ಎಷ್ಟು ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿದೆ ;

(ಇ) ಈ ಹಂಚಿಕೆಯಾದ ಭೂಮಿಯಲ್ಲಿ ಎಷ್ಟು ಎಕರೆ ಜಮೀನನ್ನು ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲಾಗಿದೆ ;

(ಈ) ಈ ವಿಶ್ವವಿದ್ಯಾಲಯ ಆರಂಭವಾದಾಗಿನಿಂದ ಮೂಲಭೂತ ಸೌಲಭ್ಯ ಮತ್ತು ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು)

(ಉ) ಬಿಡುಗಡೆಯಾದ ಹಣದಲ್ಲಿ ಎಷ್ಟು ಹಣವನ್ನು ವ್ಯಯ ಮಾಡಲಾಗಿದೆ; (ಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಊ) ಪೂರ್ತಿ ಹಣ ಖರ್ಚಾಗದೆ ಉಳಿದಿದ್ದಲ್ಲಿ ಇದಕ್ಕೆ ಕಾರಣವೇನು? (ಮಾಹಿತಿ ನೀಡುವುದು)